ಓಎಸ್ ನಂಃ 195/2013 ಪಿಡಬ್ಲ್ಯೂ - 1

ದಿನಾಂಕಃ 23.08.2022 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಮಾಡಿಸಲಾಯಿತು.

## ಮುಖ್ಯ ವಿಚಾರಣೆಃ ವಾದಿಯ ಪರ ಶ್ರೀ ಜಿಜೆ ಎಲ್ ವಕೀಲರಿಂದಃ

ನಾನು ಈ ದಾವೆಯಲ್ಲಿ ವಾದಿಯಾಗಿದ್ದು ನನ್ನ ಮುಖ್ಯ ವಿಚಾರಣೆಯ ಸಲುವಾಗಿ ಶಪಥ ಪತ್ರವನ್ನು ಹಾಜರುಪಡಿಸಿದ್ದೇನೆ. ಅದನ್ನು ನನ್ನ ಹೇಳಿಕೆಯ ಮೇರೆಗೆ ತಯಾರಿಸಿದ್ದಾರೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ಸಂಗತಿಗಳು ಸತ್ಯವಾಗಿದೆ, ಇದರಲ್ಲಿ ಇರುವ ಸಹಿ ನನ್ನದು.

ದಿಃ 22.03.1984 ರ ಕ್ರಯಪತ್ರದ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ 1 ಎಂದು, ಹಣ ಪಾವತಿ ಮಾಡಿರುವ ರಶೀದಿಗಳನ್ನು ನಿಪಿ 2 ರಿಂದ 10 ಎಂದು, ಡಿಮ್ಯಾಂಡ್ ರಿಜಿಸ್ಟರ್ ನ್ನು ನಿಪಿ 11 ಎಂದು, ಮನೆ ಕಟ್ಟಡದ ಅನುಮತಿ ಪತ್ರವನ್ನು ನಿಪಿ 12 ಎಂದು ಗುರುತಿಸಲಾಯಿತು. ಅಪೀಲು ನಂ. 1183/2010 ಕಾರ್ಯ ನಿರ್ವಾಹಕ ಅಧಿಕಾರಿಯವರ ಆದೇಶ ವನ್ನು ನಿಪಿ 13 ಎಂದು ಗುರುತಿಸಲಾಯಿತು.

<u>ಪಾಟೀ ಸವಾಲುಃ</u> ಸಮಯ ಕೋರಿದ್ದು ಸಮಯ ನೀಡಲಾಯಿತು.

(ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಅನುಸಾರವಾಗಿ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಸಾ ಓ ಹೇ ಕೇ ಸ ಅದೆ.

ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾ.
ದಂಡಾಧಿಕಾರಿಗಳು, ಕೃಷ್ಣರಾಜಪೇಟೆ